ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಂಸೂದೆಗೆ ಒಪ್ಪಿಗೆ ನೀಡಲಾಯಿತು

೧೯೮೭ನೇ ಇಸವಿ ಕರ್ನಾಟಕ ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎ. ಲಕ್ಷ್ಮೀಸಾಗರ್ (ಮಾನ್ಯ ಕಾನೂನು ಮತ್ತು ಸಂಸದೀಯ ಸಚಿವರು).—ಮಾನ್ಯ ಅಧ್ಯಕ್ಷರೇ, ೧೯೮೭ನೇ ಇಸವಿಯ ಕರ್ನಾಟಕದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ೧೯೮೭ನೇ ಇಸವಿ ಕರ್ನಾಟಕ ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್ (ಮಾನ್ಯ ಕಾನೂನು ಸಚಿವರು).—ಮಾನ್ಯ ಅಧ್ಯಕ್ಷರೇ, ೧೯೮೭ನೇ ಇಸವಿ ಕರ್ನಾಟಕ ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ. *

೧೯೮೭ ಇಸವಿ ಕರ್ನಾಟಕ ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎ. ಲಕ್ಷ್ಮೀಸಾಗರ್ (ಮಾನ್ಯ ಕಾನೂನು ಮತ್ತು ಸಂಸದೀಯ ಸಚಿವರು).—ಮಾನ್ಯ ಅಧ್ಯಕ್ಷರೇ, ೧೯೮೭ನೇ ಇಸವಿ ಕರ್ನಾಟಕ ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್.—ಸನ್ಮಾನ್ಯ ಅಧ್ಯಕ್ಷರೇ, ಇದು ಒಂದು ಕಿರು ತಿದ್ದುಪಡಿ. ಇದರಲ್ಲಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳಿಗೆ ಸೇರಿದವರ ಪರವಾಗಿ ಅನ್ಯಾಯವಾಗಿದೆ ಎಂದು ಕೇಸ್ ಹಾಕಿದಾಗ, ತಪ್ಪಿತಸ್ಥರಿಗೆ ದಂಡವನ್ನು ವಿಧಿಸತಕ್ಕ ಸಮಯದಲ್ಲಿ ಫೈನ್ ಹಾಕತಕ್ಕ ಸಮಯದಲ್ಲಿ ಆ ಫೈನನ್ನು ಅನ್ಯಾಯಕ್ಕೆ ಒಳಗಾಗಿರುವವರಿಗೆ ಕೊಡಬೇಕೆಂದು ಇದೆ. ಇಲ್ಲಿ "ಮೇ" ಎಂದು ಇದೆ. ಈಗ ಕಂಪಲ್ಸರಿಯಾಗಿ ಇದನ್ನು ಕೊಡಲೇಬೇಕು ಎಂದು ಇಲ್ಲಿ "Shall" ಎಂಬ ಪದವನ್ನು ಸೇರಿಸಬೇಕೆಂದು ಈ ಅಮೆಂಡ್‌ಮೆಂಟ್ ತಂದಿದೆ. ದಯವಿಟ್ಟು ಇದಕ್ಕೆ ಒಪ್ಪಿಗೆಯನ್ನು ನೀಡಬೇಕೆಂದು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವನೆ ಏನೆಂದರೆ "೧೯೮೭ನೇ ಇಸವಿಯ ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ ೨

ಅಧ್ಯಕ್ಷರು.—"ಖಂಡ ಎರಡು ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವವನ್ನು ಅಂಗೀಕರಿಸಲಾಯಿತು

(ಎರಡನೇ ಖಂಡ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

---

* Annexure

ಖಂಡ ೧ ಇತ್ಯಾದಿ

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ, "ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸಿವ ಸೂತ್ರ ಸಂಹಿತೆ ಈ ವಿಧೇಯಕದ ಭಾಗವಾಗಿರುತ್ತದೆ,"

ಪ್ರಸ್ತಾವವನ್ನು ಅಂಗೀಕರಿಸಲಾಯಿತು

ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸಿವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು

ಪ್ರಸ್ತಾವದ ಅಂಗೀಕಾರ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಸಂಸದೀಯ ವ್ಯವಹಾರಗಳು, ಆಹಾರ ನಾಗರೀಕ ಸರಬರಾಜು ಮಂತ್ರಿ ನಗರಾಭಿವೃದ್ಧಿ ಮಂತ್ರಿಗಳು).—ಸನ್ಮಾನ್ಯ ಅಧ್ಯಕ್ಷರೇ, ೧೯೮೭ನೇ ಇಸವಿಯ ದಂಡ ಪ್ರಕ್ರಿಯೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ "೧೯೮೭ನೇ ಇಸವಿಯ ದಂಡ ಪ್ರಕ್ರಿಯೆ ಸಂಹಿತೆ (ಕರ್ನಾಟಕ ತಿದ್ದುಪಡಿ) ಮಸೂದೆಯನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು."

ಪ್ರಸ್ತಾವವು ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಲಾಯಿತು

೧೯೮೭ನೇ ಇಸವಿಯ ಸಾರ್ವಜನಿಕ ವಕ್ಫ್ (ವಿಂತಿಯನ್ನು ವಿಸ್ತರಿಸುವುದು) (ಕರ್ನಾಟಕ ತಿದ್ದುಪಡಿ) ವಿಧೇಯಕ

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು, ಸಂಸದೀಯ ವ್ಯವಹಾರಗಳು, ನಗರಾಭಿವೃದ್ಧಿ ಆಹಾರ ಮತ್ತು ನಾಗರೀಕ ಸರಬರಾಜು ಮಂತ್ರಿಗಳು) (ಮಾನ್ಯ ಗ್ರಾಮೀಣ ಅಭಿವೃದ್ಧಿ ವಸತಿ ಹಾಗೂ ವಕ್ಫ್ ಮಂತ್ರಿಗಳ ಪರವಾಗಿ).—ಮಾನ್ಯ ಅಧ್ಯಕ್ಷರೇ,

"೧೯೮೭ನೇ ಇಸವಿಯ ಸಾರ್ವಜನಿಕ ವಕ್ಫ್(ಮಿತಿಯನ್ನು ವಿಸ್ತರಿಸುವುದು) (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾಪವನ್ನು ಮಂಡಿಸಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್.—ಮಾನ್ಯ ಅಧ್ಯಕ್ಷರೇ, ಇದೊಂದು ಸಣ್ಣ ತಿದ್ದುಪಡಿ ಮಸೂದೆ. ಲಿಮಿಟೇಷನ್ನನ್ನು ಈ ವರ್ಷ ಡಿಸೆಂಬರ್‌ವರೆಗೆ ವಿಸ್ತರಣೆ ಮಾಡತಕ್ಕದ್ದು ಎಂತು ಇದು ವಕ್ಫ್ ಪ್ರಾಪರಿಟಿಗೆ ಸಂಬಂಧಪಟ್ಟದ್ದು. ಅನೇಕ ಕಡೆ ವಕ್ಫ್ ಪ್ರಾಪರ್ಟಿ ಎನ್‌ಕ್ರೋಚ್‌ಮೆಂಟ್ ಆಗಿದೆ ಅದರ ಮೇಲೆ ಕ್ರಮ ತೆಗೆದುಕೊಳ್ಳುವುದಕ್ಕೆ ಇರುವ ಲಿಮಿಟೇಷನ್‌ನನ್ನು ಈ ವರ್ಷದ ಕೊನೆಯವರೆಗೆ ವಿಸ್ತರಿಸದೇ ಹೋದರೆ, ಈ ಪ್ರಾಪರ್ಟಿಗಳನ್ನು ರಿಕವರಿ ಮಾಡುವುದಕ್ಕೆ ತೊಂದರೆಯಾಗುತ್ತದೆ. ಆವರ ಮೇಲೆ ಕ್ರಮ ತೆಗೆದುಕೊಳ್ಳುವುದಕ್ಕೆ ತೊಂದರೆಯಾಗುತ್ತದೆ. ಸಾರ್ವಜನಿಕ ಹಿತದೃಷ್ಟಿಯಿಂದ ವಕ್ಫ್ ಪ್ರಾಪರ್ಟಿಗಳ ಹಿತದೃಷ್ಟಿಯಿಂದ ಈ ವಿಸ್ತರಣೆ ಅತ್ಯಗತ್ಯ ಎಂದು ನಾನು ಮಾನ್ಯ ಸ್ನೇಹಿತರಲ್ಲಿ ಹೇಳುತ್ತೇನೆ. ಇದಕ್ಕೆ ಮನ್ನಣೆಯನ್ನು ಕೊಡಬೇಕೆಂದು ಹೇಳುತ್ತೇನೆ.

ಅಧ್ಯಕ್ಷರು.—ಪ್ರಸ್ತಾವನೆ ಏನೆಂದರೆ, "೧೯೮೭ನೇ ಇಸವಿಯ ಸಾರ್ವಜನಿಕ ವಕ್ಫ್ (ವಿಂತಿಯನ್ನು ವಿಸ್ತರಿಸುವುದು) (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ ೨